ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ5[1]ಅಧೀ:ಬಡ್ತಿ:03:2013-14 ದಿನಾಂಕ:03-03-2014

## : ಜ್ಞಾ ಪ ನ

**ವಿಷಯ:** ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ವ್ಯಾಪ್ತಿಯಲ್ಲಿ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರ.ದ.ಸಹಾಯಕರು/ಶೀಘ್ರಲಿಪಿಗಾರರಿಗೆ ಅಧೀಕ್ಷಕರ ಹುದ್ದೆಗೆ ಸ್ಥಾನಾಪನ್ನ ಬಡ್ತಿ ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂ.ಡಿಪಿಎಆರ್:12:ಎಸ್‌ಡಿಇ:2007, ದಿ:29.01.2008.
2] ಸರ್ಕಾರದ ಸುತ್ತೋಲೆ ಸಂ:ಇಡಿ:250:ಡಿಪಿಐ:2006, ದಿನಾಂಕ.22.02.2008.
3] ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಸಿ5[1]ಪ್ರ.ದ.ಸ:ಜೇಷ್ಠತೆ:10:2011-12 ದಿನಾಂಕ:01.08.2012.
4] ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಸಿ5[2]ಶೀ.ಲಿ.ಜೇ.ಪ:09:2011-12 ದಿನಾಂಕ:04.11.2011.
5] ದಿನಾಂಕ:16-11-2013ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯ ನಡಾವಳಿ.

*****

**ಪ್ರಸ್ತಾವನೆ:**

ಉಲ್ಲೇಖ [1] ಮತ್ತು [2]ರ ಸರ್ಕಾರದ ಅಧಿಸೂಚನೆ ಮತ್ತು ಸುತ್ತೋಲೆಗಳನ್ವಯ ಬೆಂಗಳೂರು ಆಯುಕ್ತರ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿಯಾದ ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಥಮ ದರ್ಜೆ ಸಹಾಯಕರುಗಳ ಮತ್ತು ಶೀಘ್ರಲಿಪಿಗಾರರ ಅಂತಿಮ ಜೇಷ್ಠತಾ ಪಟ್ಟಿಗಳನ್ನು ಉಲ್ಲೇಖ [3] ಮತ್ತು [4]ರಂತೆ ಪ್ರಕಟಿಸಲಾಗಿದೆ. ಈ ವೃಂದದ ನೌಕರರುಗಳಿಗೆ ಅಧೀಕ್ಷಕರ ಹುದ್ದೆಗಳಿಗೆ ಸ್ಥಾನಾಪನ್ನ ಬಡ್ತಿ ನೀಡುವ ಬಗ್ಗೆ ಸಲ್ಲಿಸಿದ್ದ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿದೆ. ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅಧೀಕ್ಷಕರ ಹುದ್ದೆಗಳನ್ನು 35:1ರ ಅನುಪಾತದಂತೆ ಕ್ರಮವಾಗಿ ಪ್ರ.ದ.ಸ ಹಾಗೂ ಶೀಘ್ರಲಿಪಿಗಾರರ ವೃಂದಗಳಿಗೆ ವರ್ಗೀಕರಿಸಲಾಗಿದೆ. ಉಲ್ಲೇಖ(5)ರ ಇಲಾಖಾ ಮುಂಬಡ್ತಿ ಸಭೆ ನಡಾವಳಿಯಂತೆ 48 ಮಂದಿಗೆ ಅಧೀಕ್ಷಕರ ಹುದ್ದೆಗೆ ಬಡ್ತಿ ನೀಡಲು ತೀರ್ಮಾನಿಸಲಾಗಿತ್ತು. ಅದರಂತೆ ದಿನಾಂಕ:7-12-2013ರಂದು 41 ಪ್ರಥಮ ದರ್ಜೆ ಸಹಾಯಕರು/ಶೀಘ್ರಲಿಪಿಗಾರರಿಗೆ ಕೌನ್ಸಿಲಿಂಗ್ ನಡೆಸಲಾಗಿದ್ದು, ಹುದ್ದೆ ಖಾಲಿ ಇಲ್ಲದ ಕಾರಣ, ಉಳಿಕೆ 07 ಮಂದಿಗೆ ಕೌನ್ಸಿಲಿಂಗ್ ನಡೆಸಲಾಗಿರುವುದಿಲ್ಲ. ದಿನಾಂಕ:31-3-2014ಕ್ಕೆ ಖಾಲಿಯಾಗುವ 07 ಹುದ್ದೆಗಳನ್ನು ಪರಿಗಣಿಸಿ, ದಿನಾಂಕ:01-03-2014ರಂದು ಈ 07 ಮಂದಿಗೆ ಕೌನ್ಸಿಲಿಂಗ್ ನಡೆಸಲಾಯಿತು.

ಪ್ರಸ್ತುತ ಖಾಲಿ ಇರುವ ಅಧೀಕ್ಷಕರ ಹುದ್ದೆಗಳನ್ನು ಅರ್ಹ ಪ್ರಥಮ ದರ್ಜೆ ಸಹಾಯಕರುಗಳಿಗೆ ಜೇಷ್ಠತೆ ಮತ್ತು ಮೀಸಲಾತಿ ನಿಯಮಗಳನ್ವಯ ಸ್ಥಾನಾಪನ್ನ ಬಡ್ತಿ ನೀಡಿ ತುಂಬಲು ಪರಿಶೀಲಿಸಿ ಕೆಳಗಿನಂತೆ ಆದೇಶಿಸಲಾಗಿದೆ.

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಆಯುಕ್ತರ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ 04 ಪ್ರಥಮ ದರ್ಜೆ ಸಹಾಯಕರು / ಶೀಘ್ರಲಿಪಿಗಾರರಿಗೆ ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಕೆಳಕಂಡ ಷರತ್ತುಗಳೊಂದಿಗೆ ಜೇಷ್ಠತೆ ಮತ್ತು ಮೀಸಲಾತಿ ನಿಯಮಗಳನ್ವಯ ಅಧೀಕ್ಷಕರ ಹುದ್ದೆಯ ವೇತನ ಶ್ರೇಣಿ ರೂ. 20,000-36,300 ರಲ್ಲಿ ಸ್ಥಾನಾಪನ್ನ ಬಡ್ತಿ ನೀಡಿ, ದಿನಾಂಕ:01-03-2014ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ನೌಕರರು ಸ್ವತ: ಸ್ಥಳ ಆಯ್ಕೆ ಮಾಡಿಕೊಂಡಂತೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

| ಕ್ರ. ಸಂ. | ಅಧಿಕಾರಿ/ ನೌಕರರ ಹೆಸರು ಮತ್ತು ಕಾರ್ಯ ನಿರ್ವಹಿಸುತ್ತಿರುವ ಶಾಲಾ ಕಾಲೇಜು /ಕಛೇರಿ ಪೂರ್ಣವಿಳಾಸ | ಅಧೀಕ್ಷಕರ ಹುದ್ದೆಯಲ್ಲಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ |
|---|---|---|
| 1. | ಶ್ರೀ ಬಿ.ನರೇಂದ್ರಕುಮಾರ್, ಪ್ರ.ದ.ಸ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-3 [ಶ್ರೀ ಸುಬ್ಬರಾವ್ ರವರ ನಿಧನದಿಂದ ತೆರವಾದ ಹುದ್ದೆ] |
| 2. | ಶ್ರೀ ಎನ್.ವಿನಯ್‌ಕುಮಾರ್,ಪ್ರ.ದ.ಸ, ಉಪನಿರ್ದೇಶಕರ ಕಛೇರಿ, ಸಾ.ಶಿ.ಇಲಾಖೆ,ಮಂಡ್ಯ ಜಿಲ್ಲೆ, ಮಂಡ್ಯ | ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು [ ದಿ:31-3-2014ಕ್ಕೆ ಶ್ರೀ ನಾಗಪ್ರಸಾದ್ ರವರ ನಿವೃತ್ತಿಯಿಂದ ತೆರವಾಗಲಿರುವ ಹುದ್ದೆಗೆ] |

| | | |
|---|---|---|
| 3. | ಶ್ರೀ ಕೆ.ಎಸ್.ರಾಜಶೇಖರಯ್ಯ,ಪ್ರ.ದ.ಸ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-3 | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ[ದಿನಾಂಕ:31.3.2014 ಕ್ಕೆ ಶ್ರೀ ಸೈಯದ್ ಕಲೀಮುಲ್ಲ ರವರ ನಿವೃತ್ತಿಯಿಂದ ತೆರವಾಗಲಿರುವ ಹುದ್ದೆಗೆ] |
| 4. | ಶ್ರೀ ಎಲ್.ಗಣೇಶ್, ಪ್ರ.ದ.ಸ, ಸರ್ಕಾರಿ ಪ್ರೌಢಶಾಲೆ, ಹಿರೇಮಲ್ಲನಹೊಳೆ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ | ಉಪನಿರ್ದೇಶಕರ ಕಛೇರಿ, ಸಾ.ಶಿ.ಇಲಾಖೆ, ಮಡಿಕೇರಿ, ಕೊಡಗು ಜಿಲ್ಲೆ [ದಿನಾಂಕ:28-2-2014 ಕ್ಕೆ ಶ್ರೀ ಡಿ.ಆರ್.ಕುಮಾರಸ್ವಾಮಿ ರವರ ನಿವೃತ್ತಿಯಿಂದ ತೆರವಾದ ಹುದ್ದೆಗೆ] |

***ಷರತ್ತುಗಳು:***

01. ನೌಕರರು ಅಧೀಕ್ಷಕರ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಅಧೀಕ್ಷಕರ ಹುದ್ದೆಯಲ್ಲಿ ಕ.ನಾ.ಸೇ.ನಿಯಮ 42[ಬಿ] ಅನ್ವಯ ವೇತನ ನಿಗದಿಗೆ ಅರ್ಹರಿರುತ್ತಾರೆ.
02. ನಿಗಧಿಪಡಿಸಿರುವ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆ ಹೊಂದಿರುವ ಬಗ್ಗೆ ಕಛೇರಿ ಮುಖ್ಯಸ್ಥರು ಸೂಕ್ತ ದಾಖಲೆಗಳನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.
03. ಈ ನೌಕರರ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಅಲ್ಲದೆ ಸರ್ಕಾರಿ ನೌಕರನ ವಿರುದ್ಧ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ಪ್ರಾರಂಭವಾಗಿ ಅಂತಹ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ದಂಡನೆಯಲ್ಲಿ ಪರ್ಯಾವಸಾನಗೊಂಡಿದ್ದಲ್ಲಿ, ಆ ದಂಡನೆಯು ಜಾರಿಯಲ್ಲಿರುವ ಅವಧಿಯಲ್ಲಿ ಅಂತಹ ಸರ್ಕಾರಿ ನೌಕರರಿಗೆ ಮುಂಬಡ್ತಿ ಹೊಂದಲು ಆಸ್ಪದವಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ. ಪ್ರಥಮ ದರ್ಜೆ ಸಹಾಯಕರ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ, ಇದನ್ನು ಖಚಿತಪಡಿಸಿಕೊಳ್ಳುವುದು.
04. ಈ ಎಲ್ಲಾ ಅಂಶಗಳನ್ನು ಕಛೇರಿ ಮುಖ್ಯಸ್ಥರು ಪರಿಶೀಲಿಸಿ ಸ್ಥಾನಾಪನ್ನ ಬಡ್ತಿ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದಿಸಲು ಕ್ರಮ ವಹಿಸಿ ಈ ಕಛೇರಿಗೆ ವರದಿ ಮಾಡತಕ್ಕದ್ದು.
05. ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ನೌಕರರುಗಳನ್ನು ಸ್ಥಾನಾಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.
06. ಸಂಬಂಧಿಸಿದ ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ನೌಕರರನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.
07. ಬಡ್ತಿ ಹೊಂದಿ ಸ್ಥಳ ನಿಯುಕ್ತಿಗೊಳಿಸಿರುವ ನೌಕರರು ಸ್ಥಳ ನಿಯುಕ್ತಿಗೊಳಿಸಿರುವ ಕಚೇರಿಯಲ್ಲಿ ಈ ಆದೇಶ ತಲುಪಿದ 15 ದಿನಗಳ ಒಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು ತಪ್ಪಿದಲ್ಲಿ ನಿಯಮಾನುಸಾರ ಬಡ್ತಿಯನ್ನು ರದ್ದುಪಡಿಸಲಾಗುವುದು.
08. ಕ್ರಮ ಸಂಖ್ಯೆ(2) ಮತ್ತು (3)ರ ನೌಕರರು ದಿನಾಂಕ:31-3-2014ರಂದು ಹುದ್ದೆ ಖಾಲಿ ಆದ ನಂತರ ಬಿಡುಗಡೆಗೊಂಡು ಬಡ್ತಿ ನೀಡಿದ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗುವುದು.
09. ನೌಕರರ ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೆ ಈ ಕಛೇರಿಗೆ ವರದಿ ಸಲ್ಲಿಸುವುದು.

***[ಕರಡು ಪ್ರತಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]***

Philomenah

[ಫಿಲೋಮಿನಾ ಲೋಬೋ]

ಅಪರ ಆಯುಕ್ತರು [ಆಡಳಿತ] [ಹೆ.ಪ್ರ]

5/2/14

***ಪ್ರತಿಗಳು:***

01. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
02. ಕಾರ್ಯದರ್ಶಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಸಾ.ಶಿ.ಇಲಾಖೆ ಮೈಸೂರು ವಿಭಾಗ
03. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
04. ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರುಗಳಿಗೆ.
05. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
06. ಸಹನಿರ್ದೇಶಕರು [ಆಡಳಿತ] ರವರ ಆಪ್ತ ಶಾಖೆಗೆ.
07. ಸಂಬಂಧಿಸಿದ ಕಛೇರಿ : ಶಾಲಾ ಕಾಲೇಜು ಮುಖ್ಯಸ್ಥರುಗಳಿಗೆ
08. ಸಂಬಂಧಿಸಿದ ನೌಕರರುಗಳಿಗೆ.

ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ5[1]ಅಧೀ:ಬಡ್ತಿ:3:2013-14 ದಿನಾಂಕ:03-03-2014

## : ಜ್ಞಾ ಪ ನ :

**ವಿಷಯ:** ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರ.ದ.ಸಹಾಯಕರುಗಳಿಗೆ ಅಧೀಕ್ಷಕರ ಹುದ್ದೆಗೆ ಸ್ಥಾನಾಪನ್ನ ಬಡ್ತಿ ನೀಡುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಸಿ5[1]ಪ್ರ.ದ.ಸ:ಜೇಷ್ಠತೆ:10:2011-12 ದಿನಾಂಕ:01.08.2012.

2] ದಿನಾಂಕ:16.11.2013ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯ ನಡಾವಳಿ.

ಕ್ಷಕ್ಷಕ್ಷಕ್ಷಕ್ಷ

ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಅಧೀಕ್ಷಕರ ಹುದ್ದೆಗಳಿಗೆ ಜೇಷ್ಠತೆ ಮತ್ತು ಮೀಸಲಾತಿ ನಿಯಮಗಳನ್ವಯ ಅರ್ಹ ನೌಕರರುಗಳಿಗೆ ಬಡ್ತಿ ನೀಡಲು ಉಲ್ಲೇಖ [2]ರಂತೆ ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಇದರಂತೆ ಅರ್ಹ ನೌಕರರಿಗೆ ದಿನಾಂಕ:01-03-2014ರಂದು ಕೌನ್ಸೆಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಕೌನ್ಸೆಲಿಂಗ್‌ನಲ್ಲಿ ಭಾಗವಹಿಸಿದ ಈ ಕೆಳಕಂಡ ನೌಕರರು ಸ್ಥಳ ಆಯ್ಕೆ ಮಾಡಿಕೊಳ್ಳದೆ ಬಡ್ತಿಯನ್ನು ತಾತ್ಕಾಲಿಕವಾಗಿ ಮುಂದೂಡಲು ಲಿಖಿತ ಮನವಿ ಸಲ್ಲಿಸಿರುತ್ತಾರೆ.

| ಕ್ರ.ಸಂ | ಜೇಷ್ಠತಾ ಸಂಖ್ಯೆ | ಪ್ರಥಮದ ದರ್ಜೆ ಸಹಾಯಕರ ಹೆಸರು ಮತ್ತು ಕಾರ್ಯನಿರ್ವಹಿಸುತ್ತಿರುವ ಶಾಲೆ/ಕಛೇರಿ ವಿಳಾಸ. ಶ್ರೀ / ಶ್ರೀಮತಿ |
|---|---|---|
| *01.* | *164* | ಶ್ರೀ ಹರೀಶ್ ಪಿ.ಕುಲಕರ್ಣಿ, ಪ್ರ.ದ.ಸ, ಆಯುಕ್ತರ ಕಛೇರಿ, ಬೆಂಗಳೂರು |
| *02.* | *166* | ಶ್ರೀ ಸ್ಯೆಯದ್ ಅಫಾಕ್ ಅಹಮದ್, ಪ್ರ.ದ.ಸ, ಉಪನಿರ್ದೇಶಕರ ಕಛೇರಿ, ಚಿತ್ರದುರ್ಗ |
| *03.* | *167* | ಶ್ರೀಮತಿ ಎಸ್.ಆರ್.ಪುಷ್ಪ, ಪ್ರ.ದ.ಸ, ಲೋಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು |

ಈ ಮೇಲ್ಕಂಡ ನೌಕರರುಗಳ ಕೋರಿಕೆಯನ್ನು ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್:57:ಎಸ್ಆರ್ಆರ್:2001 ದಿನಾಂಕ:22.05.2002ರಲ್ಲಿ ವಿಷದಪಡಿಸಿರುವಂತೆ, ಕರ್ನಾಟಕ ನಾಗರಿಕ ಸೇವಾ ನಿಯಮ [ಸಾಮಾನ್ಯ ನೇಮಕಾತಿ ನಿಯಮಗಳು] 1977ರಲ್ಲಿನ 4.ಎ ರಂತೆ ಪರಿಗಣಿಸಿ ಸದರಿಯವರಿಗೆ ಒಂದು ವರ್ಷ ಅಥವಾ ಮುಂದೆ ನೀಡುವ ಪದೋನ್ನತಿ ಇದರಲ್ಲಿ ಯಾವುದು ನಂತರವೋ ಅಲ್ಲಿಯವರೆಗೆ ಪ್ರಥಮ ದರ್ಜೆ ಸಹಾಯಕರಾಗಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿ ಮುಂದುವರೆಯಲು ಅನುಮತಿ ನೀಡಿದೆ.

***[ಕರಡು ಪ್ರತಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]***

Hulomeale

**[ಫಿಲೋಮಿನಾ ಲೋಬೋ]**

**ಅಪರ ಆಯುಕ್ತರು [ಆಡಳಿತ] [ಹೆ.ಪ್ರ]**

3/3/14

## ಪ್ರತಿಯನ್ನು:

*01.* ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.

*02.* ಕಾರ್ಯದರ್ಶಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಸಾ.ಶಿ.ಇಲಾಖೆ ಮೈಸೂರು ವಿಭಾಗ,ಮೈಸೂರು

*03.* ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿನ ಜಿಲ್ಲಾ ಉಪನಿರ್ದೇಶಕರುಗಳಿಗೆ.

*04.* ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರುಗಳಿಗೆ.

*05.* ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.

*06.* ಸಹನಿರ್ದೇಶಕರು (ಆಡಳಿತ) ರವರ ಆಪ್ತ ಶಾಖೆಗೆ.

*07.* ಸಂಬಂಧಿಸಿದ ಕಛೇರಿ : ಶಾಲಾ : ಕಾಲೇಜು ಮುಖ್ಯಸ್ಥರುಗಳಿಗೆ

*08.* ಸಂಬಂಧಿಸಿದ ನೌಕರರುಗಳಿಗೆ. 9] ಜ್ಞಾಪನಾ ಕಡತ / ಕಛೇರಿ ಪ್ರತಿ.

E:\supt pro 2013\ಬಡ್ತಿ ನಿರಾಕರಣೆ.doc